**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

# ಸಿ.ಸಿ. ನಂ.977/2019

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಅಂಬುಜಮ್ಮ | ಸಿಡಬ್ಲ್ಯೂ -01 |
| ಗಂಡನ ಹೆಸರು | : | ನಾಗರಾಜಪ್ಪ | ಪಿ ಡಬ್ಲ್ಯೂ- 01 |
| ವಯಸ್ಸು | : | 39 ವರ್ಷ | |
| ಉದ್ಯೋಗ | : | ಕೂಲಿ ಕೆಲಸ | |
| ವಾಸಸ್ಥಳ | : | ಕಡೇವುಡೇವು ಗ್ರಾಮ | ದಿಃ05-07-2025. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಈಗ್ಗೆ 5 ವರ್ಷಗಳ ಹಿಂದೆ ಚಳ್ಳಕೆರೆಗೆ ಬ್ಯಾಂಕಿಗೆ ಬಂದು ವಾಪಾಸ್ಸು ಹಿರಿಯೂರು ರಸ್ತೆಯಲ್ಲಿ ಚರಂಡಿ ಪಕ್ಕದಲ್ಲಿ ಹೋಗುತ್ತಿದ್ದಾಗ ಸರ್ಕಾರಿ ಬಸ್ಸು ಹಿಂದಿನಿಂದ ಬಂದು ನನ್ನ ಎಡಭಾಗಕ್ಕೆ ಡಿಕ್ಕಿ ಪಡಿಸಿರುತ್ತದೆ. ಅಪಘಾತದಲ್ಲಿ ನನ್ನ ಎಡಭಾಗದ ಭುಜದ ಮೂಳೆಯು ಮುರಿದಿರುತ್ತದೆ. ತಲೆಗೆ ಪೆಟ್ಟುಗಳಾಗಿದ್ದು, ಎಲ್ಲಾ ಹಲ್ಲುಗಳು ಮುರಿದು ಹೋಗಿರುತ್ತವೆ. ಬಸ್ಸನ್ನು ಚಾಲನೆ ಮಾಡುತ್ತಿದ್ದ ಚಾಲಕನ ಹೆಸರು ಹಾಗೂ ಬಸ್ಸಿನ ನೋಂದಣಿ ಸಂಖ್ಯೆ ನನಗೆ ಗೊತ್ತಿಲ್ಲ. ನಂತರ ನನ್ನನ್ನು ಆಸ್ಪತ್ರೆಗೆ ನನ್ನ ತಮ್ಮ ಕರೆದುಕೊಂಡು ಹೋಗಿ ದಾಖಲಿಸಿರುತ್ತಾರೆ. ಆಸ್ಪತ್ರೆಯಲ್ಲಿ ಪೊಲೀಸರಿಗೆ ಹೇಳಿಕೆ ದೂರನ್ನು ನೀಡಿರುತ್ತೇನೆ.

ಸಾಕ್ಷಿಗೆ ಹೇಳಿಕೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಹೇಳಿಕೆ ದೂರನ್ನು ನಿಪಿಃ1 ಅಂತ, ಸಾಕ್ಷಿಯ ಸಹಿಯನ್ನು ನಿಪಿಃ1(ಎ) ಅಂತ ಗುರುತಿಸಲಾಯಿತು. ಪೊಲೀಸರಿಗೆ ನಾನು ಮರು ಹೇಳಿಕೆ ನೀಡಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ನೋಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿ. 20.06.2019 ರಂದು ಬೆಳಿಗ್ಗೆ ಬ್ಯಾಂಕಿನ ಕೆಲಸ ಮುಗಿಸಿ ಜಾಮೀಯಾ ಕಾಂಪ್ಲೆಕ್ಸ್ ನ ಮುಂಭಾಗ ವಾಸವಿ ಮಹಲ್ ಕಡೆಗೆ ರಸ್ತೆ ದಾಟುತ್ತಿದ್ದೆ ಎಂದರೆ ಸರಿ. ಆಗ ಬೆಂಗಳೂರು ಕಡೆಯಿಂದ ಬಸ್ಸು ಬಂದಿರುತ್ತದೆ ಎಂದರೆ ಸರಿ. ಸದರಿ ಬಸ್ಸು ಅತೀವೇಗವಾಗಿ ಬಂದು ನನಗೆ ಡಿಕ್ಕಿ ಪಡಿಸಿರುತ್ತದೆ ಎಂದರೆ ಸರಿ. ಸದರಿ ಬಸ್ಸಿನ ನಂಬರ್ ಕೆಎ-34 ಎಫ್ -1300 ಎಂದರೆ ನನಗೆ ಗೊತ್ತಿಲ್ಲ. ಬಸ್ಸಿನ ಚಾಲಕ ಹೆಸರು ಹೆಗ್ಗಪ್ಪ ತಂದೆ ಸಿದ್ದಪ್ಪ ಎಂದು ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಅಪಘಾತ ಪಡಿಸಿ ನನ್ನನ್ನು ಆಸ್ಪತ್ರೆಗೆ ದಾಖಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗೆ ತೊಂದರೆ ಆಗಬಾರದು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ದಿನಾಂಕಃ 20.06.2019 ರಂದು ಆರೋಪಿಯನ್ನು ನೋಡಿ ಗುರುತಿಸಿ ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಮರು ಹೇಳಿಕೆಯನ್ನು ನಿಪಿ.2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಬಿ ಎಸ್ ಓ ಆರೋಪಿಯ ಪರ ವಕೀಲರಿಂದಃ**

ನನಗೆ ಓದಲು ಬರೆಯಲು ಬರುವುದಿಲ್ಲ. ನಿಪಿ.1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಅಪಘಾತ ನಡೆದಿದೆ ಎನ್ನಲಾದ ಸಾಕಷ್ಟು ಜನರು ಓಡಾಡುತ್ತಾರೆ ಎಂದರೆ ಸರಿ. ಜನ ಭರಿತ ಸ್ಥಳವಾಗಿರುವುದರಿಂದ ವಾಹನಗಳು ನಿಧಾನವಾಗಿ ಚಲಿಸುತ್ತವೆ ಎಂದರೆ ಸರಿ. ನಾನೇ ಗಡಿಬಿಡಿಯಾಗಿ ರಸ್ತೆ ದಾಟಿ ವಾಹನಕ್ಕೆ ಡಿಕ್ಕಿ ಪಡಿಸಿಕೊಂಡು ಅಪಘಾತ ಪಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯು ಯಾವುದೇ ತಪ್ಪು ಮಾಡದೇ ಇದ್ದರೂ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ಉಂಟಾದ ಗಾಯಗಳಿಗೆ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲ**